ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 5/12/19

# ಕೆಂಪೇಗೌಡ ಕೇಂದ್ರ ರದ್ದು ಆದೇಶ ವಾಪಸ್

## ನ.18ರಂದು ಹೊರಡಿಸಿದ್ದ ಆದೇಶವನ್ನು ಡಿಕೆಶಿ ಬೆದರಿಕೆ ಬೆನ್ನಲ್ಲೇ ದಿಢೀರ್ ಹಿಂಪಡೆದ ಸರ್ಕಾರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 5/12/19

ಬೆಂಗಳೂರು ವಿಶ್ವವಿದ್ಯಾಲಯದ ಆವರಣದಲ್ಲಿ ಸ್ಥಾಪಿಸಲು ಉದ್ದೇಶಿಸಿದ್ದ 'ನಾಡಪ್ರಭು ಕೆಂಪೇಗೌಡ ಅಧ್ಯಯನ ಪೀಠ' ಸ್ಥಾಪನೆ ಕಾಮಗಾರಿಯನ್ನು ಕೈಬಿಟ್ಟು ಸಂಬಂಧಿಸಿದ ಟೆಂಡರ್ ರದ್ದು ಮಾಡುವಂತೆ ಹೊರಡಿಸಿದ್ದ ಆದೇಶವನ್ನು ಸರ್ಕಾರ ಬುಧವಾರ ದಿಢೀರ್ ವಾಪಸ್ ಪಡೆದಿದೆ.

ಮಾಜಿ ಸಚಿವ ಡಿ.ಕೆ.ಶಿವಕುಮಾರ್ ಅವರು, ದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ರಾಜಕೀಯ ದುರುದ್ದೇಶದಿಂದ ರಾಜ್ಯ ಸರ್ಕಾರ 'ಕೆಂಪೇಗೌಡ ಅಧ್ಯಯನ ಪೀಠ' ಪ್ರಸ್ತಾವನೆಯನ್ನು ಕೈ ಬಿಟ್ಟಿದೆ. ಇದರ ವಿರುದ್ಧ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ ಬೆನ್ನಲ್ಲೇ ಸರ್ಕಾರ ಈ ವಿಚಾರವಾಗಿ ಹೊರಡಿಸಿದ್ದ ಆದೇಶವನ್ನು ವಾಪಸ್ ಪಡೆದಿದೆ. ಕೆಂಪೇಗೌಡ ಅಧ್ಯಯನ ಪೀಠದ ಕಾಮಗಾರಿ ಕೈಬಿಟ್ಟು, ಟೆಂಡರ್ ರದ್ದುಪಡಿಸಲು ನವೆಂಬರ್ 18ರಂದು ಬಿಬಿಎಂಪಿ ಆಯುಕ್ತರಿಗೆ ನಗರಾಭಿವೃದ್ಧಿ ಇಲಾಖೆ ಹೊರಡಿಸಲಾಗಿದ್ದ ಆದೇಶವನ್ನು ಹಿಂಪಡೆದಿರುವುದಾಗಿ ಆಯುಕ್ತರಿಗೆ ಸರ್ಕಾರ ಬುಧವಾರ ಮತ್ತೊಂದು ಪತ್ರ ರವಾನಿಸಿದೆ.

**ಅಧ್ಯಯನ ಪೀಠ:** ಬೆಂಗಳೂರು ವಿವಿ ಆವರಣದಲ್ಲಿ ಬಿಬಿಎಂಪಿಯಿಂದ ನಾಡಪ್ರಭು ಕೆಂಪೇಗೌಡ ಅಧ್ಯಯನ ಪೀಠ ಸ್ಥಾಪನೆಗೆ ಹಿಂದಿನ ಕಾಂಗ್ರೆಸ್ ಸರ್ಕಾರ ತೀರ್ಮಾನಿಸಿತ್ತು. ನಂತರ ಸರ್ಕಾರದ ಸೂಚನೆಯಂತೆ ಈ ವಿಚಾರವಾಗಿ ಬೆಂಗಳೂರು ವಿವಿ ಮತ್ತು ಬಿಬಿಎಂಪಿ ನಡುವೆ ಒಪ್ಪಂದವೂ ಆಗಿದೆ. ಅಧ್ಯಯನ ಪೀಠಕ್ಕೆ ಅಗತ್ಯ ಭೂಮಿ ನೀಡಲು ಬೆಂಗಳೂರು ವಿವಿ ಒಪ್ಪಿ ಸುಮಾರು ಮೂರು ಎಕರೆ ಜಾಗವನ್ನು ಮಲ್ಲತ್ತಹಳ್ಳಿ ಭಾಗದಲ್ಲಿ ನಿಗದಿಪಡಿಸಿದೆ. ಈ ಜಾಗದಲ್ಲಿ ಬಿಬಿಎಂಪಿ ಅಧ್ಯಯನ ಪೀಠ ಸ್ಥಾಪನೆಯ ಕಾಮಗಾರಿಗೆ ಅಂದಾಜು ವೆಚ್ಚ ಸಿದ್ಧಪಡಿಸಿ 2019ರ ಮೇನಲ್ಲಿ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಿತ್ತು.

ನವೆಂಬರ್ 4ರಂದು ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಅವರ ನೇತೃತ್ವದ ಸಮಿತಿಯ ಸಭೆಯಲ್ಲಿ ಈ ಪ್ರಸ್ತಾವನೆ ಮಂಡನೆಯಾದಾಗ, ಬಿಬಿಎಂಪಿಯ ಪ್ರಸಕ್ತ ಆರ್ಥಿಕ ಪರಿಸ್ಥಿತಿಯಲ್ಲಿ ಈ ಯೋಜನೆ ಕೈಗೊಳ್ಳಲು ಸೂಕ್ತ ಅನುದಾನ ಲಭ್ಯವಿಲ್ಲವೆಂದು ಸ್ವತಃ ಪಾಲಿಕೆ ಆಯುಕ್ತರೇ ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಸದರಿ ಅಧ್ಯಯನ ಪೀಠದ ಕಾಮಗಾರಿಯನ್ನು ಕೈಡಲು ಮತ್ತು ಟೆಂಡರ್ ರದ್ದುಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಗಿದೆ. ಅದರಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ನಗರಾಭಿವೃದ್ಧಿ ಇಲಾಖೆ ಬಿಬಿಎಂಪಿ ಆಯುಕ್ತರಿಗೆ ನ.18ರಂದು ಪತ್ರ ಬರೆದು ಸೂಚನೆ ನೀಡಿತ್ತು.

## ಡಿಕೆಶಿ ಆಕ್ರೋಶ

ನವದೆಹಲಿ: ನಾಡಪ್ರಭು ಕೆಂಪೇಗೌಡ ಅಧ್ಯಯನ ಕೇಂದ್ರ ಸ್ಥಾಪಿಸಿ ಮೈತ್ರಿ ಸರ್ಕಾರ ಹೊರಡಿಸಿದ್ದ ಆದೇಶ



ವನ್ನು ಈಗಿನ ಬಿಜೆಪಿ ಸರ್ಕಾರ ಹಿಂಪಡೆದಿದೆ ಎಂದು ಮಾಜಿ ಸಚಿವ ಡಿ.ಕೆ.ಶಿವಕುಮಾರ್ ಖಂಡಿಸಿದ್ದಾರೆ. ಈ ಬಗ್ಗೆ ಬುಧವಾರ ರಾತ್ರಿ ದೆಹಲಿಯಲ್ಲಿ ಪತ್ರಿಕಾ ಗೋಷ್ಠಿ ನಡೆಸಿ ಮಾತನಾಡಿದ ಅವರು, ಕೆಂಪೇಗೌಡ ಅವರ ಹೆಸರಲ್ಲಿ ಅಧ್ಯಯನ ಕೇಂದ್ರ ಸ್ಥಾಪನೆ ಮಹಾನ್ ವ್ಯಕ್ತಿಗೆ ಸಲ್ಲಿಸುವ ಗೌರವವಾಗಿದ್ದು, ಈ ವಿಚಾರದಲ್ಲೂ ಯಡಿಯೂರಪ್ಪನವರ ಸರ್ಕಾರ ರಾಜಕೀಯ ಮಾಡುತ್ತಿರುವುದು ನಾಚಿಕೆಗೇಡಿನ ವಿಚಾರ ಎಂದರು. ಸರ್ಕಾರ ಈ ನಿರ್ಧಾರ ಹಿಂಪಡೆಯದಿದ್ದಲ್ಲಿ ಬೀದಿಗಿಳಿದು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.